ಜೆಎಸ್‌ಎಸ್ ಮಹಾವಿದ್ಯಾಪೀಠ

**ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು**

(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)

'ಉತ್ಕೃಷ್ಟತಾ ಅಂತಃಸಾಮರ್ಥ್ಯ ಉಳ್ಳ' ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ

ಊಟಿರಸ್ತೆ, ಮೈಸೂರು-570 025, ಕರ್ನಾಟಕ

JSS COLLEGE OF ARTS, COMMERCE & SCIENCE OOTY ROAD, MYSORE

☎ 0821-2548236 & 2548380 Fax: 0821-2548238 E-mail: jssautonomous@gmail.com

ದಿನಾಂಕ: 09.09.2015

## ಪ್ರಕಟಣೆ ಕೃಪೆಗಾಗಿ

ಜಗದ್ಗುರು ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಗ್ರಾಮೀಣ ಜನತೆಯ ಉದ್ಧಾರಕರಾಗಿ, ಶೈಕ್ಷಣಿಕ ಪ್ರಗತಿಗೆ ಕಾರಣಕರ್ತರಾಗಿ, ಸಮಾಜಕ್ಕೆ ಮಾಡಿದ ಸೇವೆ ಅಪಾರ. ಅವರನ್ನು ನೆನೆಯುವ ಸಂದರ್ಭವೇ ಪುಣ್ಯಕ್ಷಣವೆಂದು ಪೂಜ್ಯ ಶ್ರೀಗಳವರನ್ನು ಭಕ್ತಿಪೂರ್ವಕವಾಗಿ ನೆನೆದ ವಿಧಾನ ಪರಿಷತ್ತಿನ ಉಪಸಭಾಪತಿಗಳಾದ ಶ್ರೀ ಮರಿತಿಬ್ಬೇಗೌಡರು, ಊಟಿರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಪದವಿ ಕಾಲೇಜಿನ ವಿದ್ಯಾರ್ಥಿ ವೇದಿಕೆಗಳ ಉದ್ಘಾಟನಾ ಸಮಾರಂಭವನ್ನು ದೀಪ ಬೆಳಗಿಸುವುದರ ಮೂಲಕ ಉದ್ಘಾಟಿಸಿದರು. ತಮ್ಮ ವಿದ್ಯಾರ್ಥಿ ಜೀವನವನ್ನು ನೆನೆಯುತ್ತಲೇ ವಿದ್ಯಾರ್ಥಿಗಳಿಗೆ ಪೋಷಕರು, ಗುರುಗಳು ಹೇಳುವ ಬುದ್ಧಿಮಾತುಗಳನ್ನು ಕೇಳಿ ಒಳ್ಳೆಯ ಬದುಕನ್ನು ನಡೆಸಿರೆಂದು ತಿಳಿಸಿದರು.

ಮೈಸೂರು ವಿಶ್ವವಿದ್ಯಾನಿಲಯದ ದೈಹಿಕ ಶಿಕ್ಷಣ ವಿಭಾಗದ ಪ್ರಭಾರ ನಿರ್ದೇಶಕರಾದ, ಸಮಾರಂಭಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಡಾ. ಪಿ ಕೃಷ್ಣಯ್ಯನವರು ಆಟ ಆಡಿ ಮಧುಮೇಹ, ಅಧಿಕರಕ್ತದೊತ್ತಡದಂತಹ ಕಾಯಿಲೆಗಳಿಂದ ದೂರವಿರಿ, ಆಟ ಸಕಾರಾತ್ಮಕ ಸ್ಪರ್ಧಾತ್ಮಕ ಆಲೋಚನೆಗಳನ್ನು ರೂಢಿಸುತ್ತದೆ ಎಂದು ಕರೆ ನೀಡಿದರು.

ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕರಾದ ಪ್ರೊ ಟಿ. ಡಿ. ಸುಬ್ಬಣ್ಣನವರು ಅಧ್ಯಕ್ಷತೆ ವಹಿಸಿದ್ದರು. ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ ಬಿ. ವಿ. ಸಾಂಬಶಿವಯ್ಯನವರು ಪ್ರಾಸ್ತಾವಿಕ ನುಡಿಗಳನ್ನಾಡಿದರು, ಪ್ರಾಚಾರ್ಯರಾದ ಪ್ರೊ ಎಂ ಮಹದೇವಪ್ಪನವರು ಕಾಲೇಜಿನಲ್ಲಿ ಲಭ್ಯವಿರುವ ಸೌಲಭ್ಯಗಳನ್ನು ಸದ್ವಿನಿಯೋಗಿಸಿಕೊಂಡು ವಿದ್ಯಾರ್ಥಿಗಳು ಏಳ್ಗೆ ಹೊಂದಬೇಕೆಂದು ಕರೆಕೊಟ್ಟರು ಡೀನ್‌ರವರಾದ ಡಾ. ಕೆ.ವಿ. ಸುರೇಶರವರು, ಸಾಂಸ್ಕೃತಿಕ ವೇದಿಕೆಯ ಸಂಚಾಲಕರಾದ ಪ್ರೊ ಪಿ ಎಂ ಮಹದೇವಸ್ವಾಮಿ. ಕ್ರೀಡಾ ವೇದಿಕೆಯ ಸಂಚಾಲಕರಾದ ಶ್ರೀ ಎಂ ಎಸ್ ವೆಂಟಕರಾವ್ ಉಪಸ್ಥಿತರಿದ್ದರು. ವಿದ್ಯಾರ್ಥಿಗಳಾದ ಸುಮಂತ್ ಆರ್ ಎಂ ಪ್ರಾರ್ಥಿಸಿದರು, ತೊಂಟದಾರ್ಯ ಸ್ವಾಗತಿಸಿದರು. ಸರಸ್ವತಿ ವಂದಿಸಿದರು, ಐಶ್ವರ್ಯ ನಿರೂಪಿಸಿದರು.

(ಪ್ರೊ ಎಂ ಮಹದೇವಪ್ಪ)

ಪ್ರಾಚಾರ್ಯರು

ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು

(ಸ್ವಾಯತ್ತ)

ಊಟಿ ರಸ್ತೆ, ಮೈಸೂರು-570 025.

ಗೆ

ಸಂಪಾದಕರು / ಪತ್ರಿಕಾ ಪ್ರತಿನಿಧಿಗಳು

-------------

-------------

ಮೈಸೂರು.